2. ಈ ಕಚೇರಿ ಅಧಿಸೂಚನೆ ಸಂಖ್ಯೆ ಆಡಳಿತ 12/2013, ದಿನಾಂಕ 27.02.2013 ರನ್ವಯ ಉಳಿದಿರುವ ಬೆರಳಚ್ಚುಗಾರರ (ಬ್ಯಾಕ್ ಲಾಗ್) ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು.

ಮೇಲ್ಕಂಡ ಅಧಿಸೂಚನೆಯನ್ವಯ ರಾಮನಗರ ಜಿಲ್ಲಾ ನ್ಯಾಯಾಲಯ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಬೆರಳಚ್ಚುಗಾರರು, ಬೆರಳಚ್ಚು ನಕಲುಗಾರರು, ಪ್ರೋಸಸ್ ಜಾರಿಕಾರರು ಮತ್ತು ಜವಾನರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ನಿಗದಿ ಪಡಿಸಿದ ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ **ದಿನಾಂಕ: 07.12.2013 ರ ಶನಿವಾರ ಸಂಜೆ 4.00 ಗಂಟೆಯ ಒಳಗೆ ಸಲ್ಲಿಸತಕ್ಕದ್ದು.**

ಅರ್ಜಿಗಳನ್ನು ಸಲ್ಲಿಸಲು ನಿಗದಿ ಮಾಡಿದ ಕೊನೆಯ ದಿನಾಂಕ 07.12.2013 ರ ಶನಿವಾರ ಸಂಜೆ 4.00 ಗಂಟೆಯವರೆಗೆ

ಖಾಲಿ ಇರುವ ಹುದ್ದೆಗಳ ವರ್ಗೀಕರಣ:

I. **ಬೆರಳಚ್ಚುಗಾರರ ಹುದ್ದೆ**

1. ಹುದ್ದೆಗಳ ಸಂಖ್ಯೆ :4
2. ವೇತನ ಶ್ರೇಣಿ Gr. 11600–200–12000–250–13000–300–14200–350–15600–400–17200–450–19000–500–21000 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.
3. **ಹುದ್ದೆಗಳ ವರ್ಗೀಕರಣ :**

ವರ್ಗೀಕರಣ	ಇತರೆ	ಮಹಿಳಾ	**ಒಟ್ಟು**
ಸಾಮಾನ್ಯ	1	1	2
ಪ್ರವರ್ಗ III (ಎ)	–	1	1
ಪರಿಶಿಷ್ಟ ಪಂಗಡ (ಬ್ಯಾಕ್ ಲಾಗ್)	–	1	1
ಒಟ್ಟು	**1**	**3**	**04**

4. ಶೈಕ್ಷಣಿಕ ವಿದ್ಯಾರ್ಹತೆ:

ಎ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಬಿ) ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿಯು ನಡೆಸುವ ಹಿರಿಯ ದರ್ಜೆಯ (Senior Grade) ಕನ್ನಡ ಮತ್ತು ಆಂಗ್ಲ ಬಾಷೆಗಳ ಬೆರಳಚ್ಚು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

II. ಬೆರಳಚ್ಚು–ನಕಲುಗಾರರ ಹುದ್ದೆ :

1. ಹುದ್ದೆಗಳ ಸಂಖ್ಯೆ : **2**
2. ವೇತನ ಶ್ರೇಣಿ Gr. 11600–200–12000–250–13000–300–14200–350–15600–400–17200–450–19000–500–21000 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.
3. ಹುದ್ದೆಗಳ ವರ್ಗೀಕರಣ:

ವರ್ಗೀಕರಣ	ಗ್ರಾಮೀಣ	**ಒಟ್ಟು**
ಸಾಮಾನ್ಯ	1	1
ಪ್ರವರ್ಗ II (ಎ)	1	1
ಒಟ್ಟು	**2**	**02**

4. ಶೈಕ್ಷಣಿಕ ವಿದ್ಯಾರ್ಹತೆಃ

ಎ) ಕರ್ನಾಟಕ ಪೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಬಿ) ಕರ್ನಾಟಕ ಪೌಢ ಶಿಕ್ಷಣ ಮಂಡಳಿಯು ನಡೆಸುವ ಕಿರಿಯ ದರ್ಜೆಯ (Junior Grade) ಕನ್ನಡ ಮತ್ತು ಆಂಗ್ಲ ಬಾಷೆಗಳ ಬೆರಳಚ್ಚು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

III ಪ್ರೋಸಸ್ ಜಾರಿಕಾರ ಹುದ್ದೆಃ

1. **ಹುದ್ದೆಗಳ ಸಂಖ್ಯೆ : 04**
2. **ವೇತನ ಶ್ರೇಣಿ Gr.** 11000–200–12000–250–13000–300–14200–350–15600–400–17200–450–19000.ಹಾಗೂ ಲಭ್ಯವಿರುವ ಇತರೆ ಭತ್ಯೆಗಳು
3. **ಹುದ್ದೆಗಳ ವರ್ಗೀಕರಣ :**

ವರ್ಗೀಕರಣ	ಇತರೆ	ಮಹಿಳಾ	ಗ್ರಾಮೀಣ	ಮಾಜಿ ಸೈನಿಕ	**ಒಟ್ಟು**
ಸಾಮಾನ್ಯ	1	1	–		2
ಪ್ರವರ್ಗ II (ಎ)	–	–	–	1	1
ಪ್ರವರ್ಗ II (ಬಿ)	–	–	1	–	1
ಒಟ್ಟು	**1**	**1**	**1**	**1**	**04**

4. ಶೈಕ್ಷಣಿಕ ವಿದ್ಯಾರ್ಹತೆಃ

ಎ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಬಿ) ಡ್ರೈವಿಂಗ್ ಲೈಸೆನ್ಸ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

IV. ಜವಾನರುಃ

1. ಹುದ್ದೆಗಳ ಸಂಖ್ಯೆ : 04

2. ವೇತನ ಶ್ರೇಣಿ Gr. 9600–200–12000–250–13000–300–14200–350–14550 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

3. ಹುದ್ದೆಗಳ ವರ್ಗೀಕರಣ :

ವರ್ಗೀಕರಣ	**ಇತರೆ**	**ಗ್ರಾಮೀಣ**	**ಒಟ್ಟು**
ಸಾಮಾನ್ಯ	1	1	2
ಪರಿಶಿಷ್ಟ ಜಾತಿ	–	1	1
ಪ್ರವರ್ಗ II--A	–	1	1
ಒಟ್ಟು	**1**	**3**	**04**

4. **ಶೈಕ್ಷಣಿಕ ವಿದ್ಯಾರ್ಹತೆಃ**

ಎ) 7ನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

ಬಿ) ಅಭ್ಯರ್ಥಿಗೆ ಕನ್ನಡದಲ್ಲಿ ಓದಲು ಹಾಗೂ ಬರೆಯಲು ತಿಳಿದಿರಬೇಕು.

ವಯೋಮಿತಿಃ

ಕನಿಷ್ಠ ವಯೋಮಿತಿಃ 18 ವರ್ಷ

ಗರಿಷ್ಠ ವಯೋಮಿತಿಃ ಸಾಮಾನ್ಯ ವರ್ಗ – 35 ವರ್ಷ

2ಎ, 2ಬಿ, 3ಎ, 3ಬಿ –38 ವರ್ಷ

ಪ.ಜಾ, ಪ.ಪಂ, ಪ್ರವರ್ಗ 1 – 40 ವರ್ಷ

ವಿಧವೆಯರಿಗೆ, ಮಾಜಿ ಸೈನಿಕರಿಗೆ, ಅಂಗವಿಕಲರಿಗೆ ಹಾಗೂ ಸರ್ಕಾರಿ ಸೇವೆಯಲ್ಲಿರುವವರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

ಆಯ್ಕೆ ವಿಧಾನಃ

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೀರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

I. ಬೆರಳಚ್ಚುಗಾರರ ಹಾಗೂ ಬೆರಳಚ್ಚು–ನಕಲುಗಾರರ ಹುದ್ದೆಗಃ

ಅ) 15 ನಿಮಿಷಗಳ ಉಕ್ತಲೇಖನವನ್ನು ಬೆರಳಚ್ಚುಪಡಿಸುವ ಅರ್ಹತಾ ಪರೀಕ್ಷೆಯನ್ನು ನಡೆಸಲಾಗುವುದು (ಗರಿಷ್ಠ 100 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳನ್ನು ಪಡೆಯಬೇಕಾಗಿರುತ್ತದೆ).

ಆ) ಸಂದರ್ಶನ

ಇ) ಬೆರಳಚ್ಚುಗಾರ / ಬೆರಳಚ್ಚು–ನಕಲುಗಾರರ ಹುದ್ದೆಗಳಿಗೆ 1:5 ರ ಅನುಪಾತದಲ್ಲಿ, ನಿಗಡಿಪಡಿಸಿದ ವಿದ್ಯಾರ್ಹತೆಗೆ ಮತ್ತು ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳಿಗೆ ಅನುಗುಣವಾಗಿ, ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಯ್ಕೆ ಮಾಡಲಾಗುವುದು, ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗುವುದು.

II. ಪ್ರೋಸಸ್ ಜಾರಿಕಾರರ ಹುದ್ದೆಗೆ :

ಅ) ಪ್ರೋಸಸ್ ಜಾರಿಕಾರ ಹುದ್ದೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

ಇ) ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗೆ ಕನ್ನಡದಲ್ಲಿ ಓದುವ ಹಾಗೂ ಬರೆಯುವ ಬಗ್ಗೆ ಪ್ರವೀಣತೆ ಮತ್ತು ಸಾಮಾನ್ಯ ಜ್ಞಾನದ ತಿಳುವಳಿಕೆಯ ಬಗ್ಗೆ ಪರೀಕ್ಷಿಸಲಾಗುವುದು.

III. ಜವಾನರ ಹುದ್ದೆಗೆ :

ಅ) ಜವಾನರ ಹುದ್ದೆಗೆ 7ನೇ ತರಗತಿಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

ಪ್ರಮುಖವಾದ ಸೂಚನೆಗಳು:

ಅಭ್ಯರ್ಥಿಗಳು ಕೆಳಕಂಡ ಪ್ರಮಾಣ ಪತ್ರಗಳ ಒಂದೊಂದು ಛಾಯಾ ಪ್ರತಿ (ಫೋಟೋ ಕಾಪಿ/ಜೆರಾಕ್ಸ್) ಗಳನ್ನು ಸ್ವಯಂ–ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಬೇಕು. ಅರ್ಜಿಯೊಂದಿಗೆ ಮೂಲ ಪ್ರತಿ (ಒರಿಜಿನಲ್) ಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ.

1. ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ, ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ –1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
4. ಅಭ್ಯರ್ಥಿಯು ಕೊನೆಯಲ್ಲಿ ವಿದ್ಯಾಭ್ಯಾಸ ಮಾಡಿದ ಶಾಲಾ, ಕಾಲೇಜಿನ ಮುಖೋಪಾಧ್ಯಾಯರು, ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ.
5. ಅಭ್ಯರ್ಥಿಯು ನಡತೆಯನ್ನು ದೃಢಿಕರಿಸುವ ಬಗ್ಗೆ ಅವನು ಓದಿರುವ ವಿದ್ಯಾಸಂಸ್ಥೆಗಳಿಗೆ ಸಂಬಂಧಪಡದ ಹಾಗೂ ಅಭ್ಯರ್ಥಿಯ ಸಂಬಂಧಿಗಳಲ್ಲದ ಇಬ್ಬರು ಸ್ಥಳೀಯ ಗಣ್ಯವ್ಯಕ್ತಿಗಳಿಂದ ಪಡೆದ 6 ತಿಂಗಳ ಈಚೆಗಿನ ಎರಡು ನಡತೆ ಪ್ರಮಾಣ ಪತ್ರಗಳು.

ಇತರೆ ಸೂಚನೆಗಳು:

1. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ಮೇಲಾಧಿಕಾರಿಗಳಿಂದ ಪಡೆದ ದೃಢೀಕರಣ ಹಾಗೂ ಅನುಮತಿ ಪ್ರಮಾಣ ಪತ್ರವನ್ನು ನೀಡತಕ್ಕದ್ದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಅರ್ಜಿಯೊಂದಿಗೆ 6 ರೂಪಾಯಿಯ ಅಂಚೆ ಮುದ್ರಾಂಕ (Postal Stamp)ವನ್ನು ಹೊಂದಿರುವ ಸ್ವ–ವಿಳಾಸದ ಲಕೋಟೆಯನ್ನು ಸಲ್ಲಿಸತಕ್ಕದ್ದು.
4. ಅರ್ಜಿಯೊಂದಿಗೆ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಒಂದು ಭಾವಚಿತ್ರವನ್ನು ಸ್ವ–ದೃಢೀಕರಿಸಿ ಲಗತ್ತಿಸಬೇಕು.
5. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನ ಪತ್ರ ಬಾರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.
6. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ

ವಿಶೇಷ ಸೂಚನೆ:

1. ಮೇಲ್ಕಂಡ ಹುದ್ದೆಗಳಿಗೆ ಅರ್ಜಿಗಳನ್ನು ರಾಮನಗರ ಪ್ರಧಾನ ಜಿಲ್ಲಾ ನ್ಯಾಯಾಲಯದ ಕಛೇರಿಯಲ್ಲಿ ವಿತರಿಸಲಾಗುತ್ತದೆ.
2. ಅರ್ಜಿಗಳನ್ನು ಪಡೆಯ ಬಯಸುವ ಅಭ್ಯರ್ಥಿಯು ಕ್ರಾಸ್ ಮಾಡಿದ 10 ರೂ.ಗಳ ಭಾರತೀಯ ಪೋಸ್ಟಲ್ ಆರ್ಡರ್ ಅಥವಾ ಬ್ಯಾಂಕ್ ಡಿ.ಡಿ.ಯನ್ನು **" ಪ್ರಧಾನ ಜಿಲ್ಲಾ ನ್ಯಾಯಾಧೀಶರು, ರಾಮನಗರ "** ರವರ ಹೆಸರಿಗೆ ಪಡೆದು ರಾಮನಗರ ಜಿಲ್ಲಾ ನ್ಯಾಯಾಲಯದ ಕಛೇರಿಗೆ ಸಲ್ಲಿಸಿ ಪಡೆಯಬಹುದು. ಪೋಸ್ಟಲ್ ಆರ್ಡರ್ ಅಥವಾ ಬ್ಯಾಂಕ್ ಡಿ.ಡಿ.ಯನ್ನು ಈ ನೇಮಕಾತಿ ಪ್ರಕಟಣಾ ದಿನದಿಂದ 15 ದಿವಸಗಳಿಗಿಂತ ಮುಂಚಿತವಾಗಿ ಪಡೆದಿರಬಾರದು. ಅಂಚೆ ಮೂಲಕ ಅರ್ಜಿ ಪಡೆಯಬಯಸುವ ಅಭ್ಯರ್ಥಿಗಳು 30 ರೂ. ಅಂಚೆ ಚೀಟಿ ಅಂಟಿಸಿದ ಸ್ವ–ವಿಳಾಸ ಬರೆದ ಲಕೋಟೆಯನ್ನು ಮತ್ತು 10 ರೂ. ಪೋಸ್ಟಲ್ ಆರ್ಡರ್ ಅಥವಾ ಬ್ಯಾಂಕ್ ಡಿ.ಡಿ.ಯ ಸಮೇತ ಕಳುಹಿಸಿದ್ದಲ್ಲಿ ಅರ್ಜಿಯನ್ನು ಕಳುಹಿಸಲಾಗುವುದು.
3. ಭರ್ತಿ ಮಾಡಿದ ಅರ್ಜಿಯ ಜೊತೆಗೆ ರೂ.50/–(ಎಸ್.ಸಿ/ಎಸ್.ಟಿ ಮತ್ತು ಪ್ರವರ್ಗ–1ಕ್ಕೆ ರೂ. 30/–) ಪೋಸ್ಟಲ್ ಆರ್ಡರ್ ಅಥವಾ ಬ್ಯಾಂಕ್ ಡಿ.ಡಿ.ಯನ್ನು **"ಪ್ರಧಾನ ಜಿಲ್ಲಾ ನ್ಯಾಯಾಧೀಶರು, ರಾಮನಗರ"** ರವರ ಹೆಸರಿನಲ್ಲಿ ಪಡೆದು ಪ್ರೊಸೆಸಿಂಗ್ ಶುಲ್ಕವಾಗಿ ಲಗತ್ತಿಸಿ **ದಿನಾಂಕ: 07.12.2013 ರ ಶನಿವಾರ ರ ಸಂಜೆ 4.00 ಗಂಟೆಯೊಳಗೆ** ಪ್ರಧಾನ ಜಿಲ್ಲಾ ನ್ಯಾಯಾಧೀಶರು, ಜಿಲ್ಲಾ ನ್ಯಾಯಾಲಯ, ರಾಮನಗರ ರವರಿಗೆ ಸಲ್ಲಿಸತಕ್ಕದ್ದು.
4. ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ನಿಗದಿತ ಅರ್ಜಿ ನಮೂನೆಯಲ್ಲಿ ಎಲ್ಲಾ ಅಂಕಣಗಳನ್ನು ಅಭ್ಯರ್ಥಿಗಳು ತಮ್ಮ ಬರಹದಿಂದಲೇ ಭರ್ತಿ ಮಾಡಿರತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

PR..118 **ಎಂ.ಕೆ ಪ್ರಹ್ಲಾದ**

SC.10 ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಮನಗರ.

ಉಡುಪಿಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ

ಅಧಿಸೂಚನೆ ಸಂಖ್ಯೆ: ADMN/ 3/2013, ದಿನಾಂಕ: 24-09-2013.

ವಿಷಯ : ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು-ನಕಲುಗಾರರು ಹುದ್ದೆಗಳ ನೇಮಕಾತಿ ಬಗ್ಗೆ.

ಓದಲಾಗಿದೆ: 1. ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ ಆಡಳಿತ-1:11:2012, ದಿನಾಂಕ 09-10-2012.

2. ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ ಆಡಳಿತ:2:2013 ದಿನಾಂಕ 13-03-2013.

3. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: LCA- II/128/2012, ದಿನಾಂಕ: 20-09-2013.

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಘಟಕದಲ್ಲಿ ಉಲ್ಲೇಖ 1 ಮತ್ತು 2ರ ಅಧಿಸೂಚನೆಯಲ್ಲಿ ಆಹ್ವಾನಿಸಿ ಭರ್ತಿಯಾಗದೆ ಖಾಲಿ ಇರುವ ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು-ನಕಲುಗಾರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 25-11-2013, ಸಂಜೆ 5-00 ಘಂಟೆ.

ಅರ್ಜಿ ಸಲ್ಲಿಸಬೇಕಾದ ವಿಳಾಸ:-_ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಜಿಲ್ಲೆ, ಉಡುಪಿ.

ಭಾಗ: 1

1. **ಶೀಘ್ರಲಿಪಿಗಾರ ಹುದ್ದೆ: (Stenographers)**

ಹುದ್ದೆಗಳ ಸಂಖ್ಯೆ: 15.

ವೇತನ ಶ್ರೇಣಿ:- 14550-350-15600-400-17200-450-19000-500-21000-600-24600-700-26700 ಹಾಗೂ ಇತರ ಭತ್ಯೆಗಳೊಂದಿಗೆ.

ಹುದ್ದೆಗಳ ವರ್ಗೀಕರಣ:-

ಮೀಸಲಾತಿ	ಕ.ಮಾ.	ಇತರೆ	ಮಹಿಳೆ	ಗ್ರಾಮೀಣ	ಅಂ.ಅ	ಮಾ.ಸೈ	ಒಟ್ಟು
ಪ. ಜಾತಿ	-	-	01	01 (Backlog)	01 (Low Vision)	-	03
ಪ್ರ - II A	-	-	01	01	01 (Low Vision)	-	03
ಪ್ರ - III A	-	01	-	-	-	-	01
ಸಾಮಾನ್ಯ	1	02	01	03	-	01	08
ಒಟ್ಟು	**01**	**03**	**03**	**05**	**02**	**01**	**15**

ಶೈಕ್ಷಣಿಕ ವಿದ್ಯಾರ್ಹತೆ:-

(1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

(2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಹಿರಿಯ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರಬೇಕು.

ಅಥವಾ

(3) ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟೇರಿಯಲ್ ಪ್ರ್ಯಾಕ್ಟೀಸ್ ಪಠ್ಯಕ್ರಮದ ಡಿಪ್ಲೊಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಮತ್ತು ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯಗಳನ್ನಾಗಿ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

ಆಯ್ಕೆ ವಿಧಾನ:-

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಪ್ರತಿ ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

2. **ಬೆರಳಚ್ಚುಗಾರ: (Typist):**

ಹುದ್ದೆಗಳ ಸಂಖ್ಯೆ : 01

ವೇತನ ಶ್ರೇಣಿ:- 11600-200-12000-250-13000-300-14200-350-15600-400-17200-450-19000-500-21000 ಹಾಗೂ ಇತರ ಭತ್ಯೆಗಳೊಂದಿಗೆ.

ಹುದ್ದೆಗಳ ವರ್ಗೀಕರಣಃ–

ಮೀಸಲಾತಿ	ಮಹಿಳೆ	ಒಟ್ಟು
ಪ್ರವರ್ಗ–2ಬಿ	01	01

ಶೈಕ್ಷಣಿಕ ವಿದ್ಯಾರ್ಹತೆಃ–

(1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

(2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಹಿರಿಯ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಆಯ್ಕೆ ವಿಧಾನಃ–

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಅಯ್ಕೆ ಮಾಡಲಾಗುವುದು.

3. ಬೆರಳಚ್ಚು–ನಕಲುಗಾರಃ (Typist-Copyist):

ಹುದ್ದೆಗಳ ಸಂಖ್ಯೆ : 02

ವೇತನ ಶ್ರೇಣಿಃ– 11600–200–12000–250–13000–300–14200–350–15600–400–17200–450–19000–500–21000 ಹಾಗೂ ಇತರ ಭತ್ಯೆಗಳೊಂದಿಗೆ.

ಹುದ್ದೆಗಳ ವರ್ಗೀಕರಣಃ–

ಮೀಸಲಾತಿ	ಅಂ.ಅ	ಒಟ್ಟು
ಪ. ಜಾತಿ	01 (Low Vision)	01
ಪ್ರವರ್ಗ – 2ಎ	01 (Low Vision)	01
ಒಟ್ಟು	**02**	**02**

ಶೈಕ್ಷಣಿಕ ವಿದ್ಯಾರ್ಹತೆಃ–

(1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

(2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕಿರಿಯ ದಜ0ೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

ಆಯ್ಕೆ ವಿಧಾನಃ–

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಅಯ್ಕೆ ಮಾಡಲಾಗುವುದು.

ಸೂಚನೆಃ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಕನ್ನಡ ಮಾಧ್ಯಮ ಹಾಗೂ ಯೋಜನಾ ನಿರಾಶ್ರಿತ ಅಭ್ಯರ್ಥಿಗಳ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಅಯಾ ವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಅಯಾ ವರ್ಗಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಇತರ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಭಾಗ–2ಃ–

ವಯೋಮಿತಿ

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

(1) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸತಕ್ಕದು.

(2) ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಎ, 3ಬಿ	38 ವರ್ಷ
ಪ.ಜಾತಿ, ಪ.ಪಂಗಡ, ಪ್ರವರ್ಗ – 1	40 ವರ್ಷ

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಟ ವಯಸ್ಸನ್ನು ಮೀರಿರಕೂಡದು.

ವಯೋಮಿತಿ ಸಡಿಲಿಕೆ:

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.
2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.
4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
6. ಅಭ್ಯರ್ಥಿಯು ರಾಜ್ಯ ಸರ್ಕಾರಿದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

ಪರಿವೀಕ್ಷಣಾ ಅವಧಿ:

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗಾಗಿ:

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

ಭಾಗ–3

ಅರ್ಜಿ ಸಲ್ಲಿಸುವ ವಿಧಾನ:

1. ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ಲಗ್ತೀಕರಿಸಿದ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚುಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತನ್ನ ಕೈಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು ಹಾಗೂ ಅರ್ಜಿ ನಮೂನೆಯಲ್ಲಿ ಹುದ್ದೆ, ವರ್ಗ ಹಾಗೂ ಮೀಸಲಾತಿಯನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡತಕ್ಕದ್ದು. **ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**
2. ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.
3. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು. **ಒಂದೇ ಹುದ್ದೆಗೆ ವಿವಿಧ ಮೀಸಲಾತಿಯಡಿಗಳಲ್ಲಿ ಅರ್ಜಿಸಲ್ಲಿಸುವವರು ಪ್ರತ್ಯೇಕವಾಗಿ ಅರ್ಜಿಗಳನ್ನು ಹಾಗೂ ಆ ಅರ್ಜಿಗಳಲ್ಲಿ ಕಡ್ಡಾಯವಾಗಿ ಯಾವ ವರ್ಗ / ಮೀಸಲಾತಿಯಡಿಯಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿರುವಿರಿ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.**
4. ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರ ಪ್ರಮಾಣ ಪತ್ರಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸತಕ್ಕದ್ದು. ಅರ್ಜಿಯೊಂದಿಗೆ ಮೂಲ ಪ್ರತಿಗಳನ್ನು ಲಗ್ತೀಕರಿಸುವ ಅವಶ್ಯಕತೆ ಇರುವುದಿಲ್ಲ. ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆದಿರಬೇಕು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:

1. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ / ವರ್ಗಾವಣೆ ಪತ್ರ / ಇನ್ಯಾವುದೇ ಅಧಿಕೃತ ದಾಖಲಾತಿಗಳು.
2. ವಿದ್ಯಾರ್ಹತೆಯ ಬಗೆಗಿನ ಅಂಕಪಟ್ಟಿಗಳ ನಕಲು ಪ್ರತಿಗಳು
3. ಪ. ಜಾತಿ / ಪ. ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು.

4. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಃಸಿಆಸುಇ /96/ ಸೇನನಿ/2005 ದಿನಾಂಕಃ 10–08–2005ರ ಪ್ರಕಾರ ನಿಗದಿತ ನಮೂನೆ–2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.
5. ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
6. ಗ್ರಾಮಿಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.
7. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
8. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿನಾಂಕಃ 19–11–2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.
9. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನನಿ/2001ರ ದಿನಾಂಕ 27–07–2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
10. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
11. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
12. ಸ್ವಯಂ ವಿಳಾಸವಿರುವ ರೂ.5/– ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.
13. ಅಭ್ಯರ್ಥಿಗಳು ಅರ್ಜಿಯೊಂದಿಗೆ ಕೊನೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಯ ಮುಖ್ಯೋಪಾಧ್ಯಾಯರು / ಪ್ರಾಂಶುಪಾಲರಿಂದ ಪಡೆದ ನಡತೆ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ಪ್ರತಿಯನ್ನು ಲಗ್ತೀಕರಿಸತಕ್ಕದ್ದು.
14. ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ನಡತೆಯ ಬಗ್ಗೆ ತಮ್ಮ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ (ಹಿಂದೆ ಕಲಿತ ಶಾಲಾ ಅಥವಾ ಕಾಲೇಜು ಮುಖ್ಯಸ್ಥರನ್ನು ಹೊರತು ಪಡಿಸಿ) ಅರ್ಜಿ ಸಲ್ಲಿಸುವ ದಿನಾಂಕದ ಆರು ತಿಂಗಳ ಒಳಗೆ ಪಡೆದ ಎರಡು ಪ್ರಮಾಣ ಪತ್ರಗಳನ್ನು ಲಗತ್ತಿಕರಿಸತಕ್ಕದ್ದು. (ಗಣ್ಯ ವ್ಯಕ್ತಿಗಳ ರುಜುವಿನಡಿಯಲ್ಲಿ ಹೆಸರು ಮತ್ತು ಮೊಹರು ಕಡ್ಡಾಯವಾಗಿ ಇರತಕ್ಕದ್ದು)

ಅಭ್ಯರ್ಥಿಗಳಿಗೆ ಸೂಚನೆಃ–

1. ಆಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
2. ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ, ಮೀಸಲಾತಿದ, ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಹಾಗೂ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಮೀಸಲಾತಿಯನ್ನು ಕೋರಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
3. ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಆಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸಮುಚಿತ ಮಾರ್ಗದ ಮುಖಾಂತರವೇ ಸಲ್ಲಿಸಬೇಕು.
4. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
5. ಆಭ್ಯರ್ಥಿಗಳು ತಮ್ಮ ಅರ್ಜಿಯ ಜೊತೆ 5–00 ರೂ.ಗಳ ಸ್ಟಾಂಪು ಲಗತ್ತಿಸಿರುವ ಸ್ವವಿಳಾಸವಿರುವ ಲಕೋಟೆಯನ್ನು ಲಗತ್ತಿಸಿರಬೇಕು.
6. ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮೇಲೆ ನಮೂದಿಸಿರಬೇಕು.
7. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗತಕ್ಕದ್ದು.
8. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವುದಿಲ್ಲ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಉಡುಪಿ.

ಅರ್ಜಿ ನಮೂನೆ

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಉಡುಪಿ ಜಿಲ್ಲೆ, ಉಡುಪಿ – ಇವರಿಗೆ.

ಮಾನ್ಯರೇ,

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಮೇಲೆ ಸಹಿ ಮಾಡಿ ಅಂಟಿಸುವುದು.

ಉಡುಪಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆಎಡಿಎಂಎನ್/ 3 /2013, ದಿನಾಂಕ: 24–09–2013 ರ ಪ್ರಕಾರ .... ಹುದ್ದೆಗೆ ನಾನು ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ.

1	ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ)						
2	ತಂದೆಯ / ತಾಯಿಯ / ಗಂಡನ ಹೆಸರು						
3	ಜನ್ಮ ದಿನಾಂಕ						
4	ವಯಸ್ಸು	ವರ್ಷಗಳು	ತಿಂಗಳುಗಳು	ದಿನಗಳು			
5	ಲಿಂಗ	ಪುರುಷ	ಮಹಿಳೆ				
6	ರಾಷ್ಟ್ರೀಯತೆ						
7	ಧರ್ಮ ಮತ್ತು ಜಾತಿ						
8	ವೈವಾಹಿಕ ಸ್ಥಿತಿ	ವಿವಾಹಿತ	ಅವಿವಾಹಿತ				
9	ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ?						
10	ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ?	ಹೌದು	ಇಲ್ಲ				
11	ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ?	ಹೌದು	ಇಲ್ಲ				
12	ಕೋರುವ ಮೀಸಲಾತಿ (ಕೋರುವ ಮೀಸಲಾತಿಯನ್ನು √ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು)	ಸಾಮಾನ್ಯ	ಪ. ಜಾತಿ	2ಎ			
		3ಎ	2ಬಿ				
13	ನೀವು ಈ ಯಾವುದಾದರೂ ಮೀಸಲಾತಿಯಡಿಯಲ್ಲಿ ಅಡಿಯಲ್ಲಿ ಬರುತ್ತೀರ? (ಸೇರುವ ಮೀಸಲಾತಿಯನ್ನು √ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು)	ಗ್ರಾಮೀಣ	ಕ.ಮಾ	ಮಾ.ಸೈ	ಅಂ.ಅ	ಮಹಿಳೆ	ಇತರೆ

14	**ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು:– (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)** **ಸೂಃ ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು**				
	ಉತ್ತೀರ್ಣ ಹೊಂದಿದ ಪರೀಕ್ಷೆಗಳು	ಉತ್ತೀರ್ಣ ಹೊಂದಿದ ವರ್ಷ ಮತ್ತು ನೋಂದಣಿ ಸಂಖ್ಯೆ.	ಗರಿಷ್ಠ ಅಂಕಗಳು	ಪಡೆದಿರುವ ಅಂಕಗಳು	ಶೇಕಡ ವಾರು ಅಂಕಗಳು
	ಎಸ್‌ಎಸ್‌ಎಲ್‌ಸಿ/ತತ್ಸಮಾನ ಪರೀಕ್ಷೆ				
	ಕನ್ನಡ ಬೆರಳಚ್ಚು (ಕಿರಿಯ ಶ್ರೇಣಿ)				
	ಆಂಗ್ಲ ಬೆರಳಚ್ಚು (ಕಿರಿಯ ಶ್ರೇಣಿ)				
	ಕನ್ನಡ ಬೆರಳಚ್ಚು (ಹಿರಿಯ ಶ್ರೇಣಿ)				
	ಆಂಗ್ಲ ಬೆರಳಚ್ಚು (ಹಿರಿಯ ಶ್ರೇಣಿ)				

	ಕನ್ನಡ ಶೀಘ್ರಲಿಪಿ (ಹಿರಿಯ ಶ್ರೇಣಿ)				
	ಆಂಗ್ಲ ಶೀಘ್ರಲಿಪಿ (ಹಿರಿಯ ಶ್ರೇಣಿ)				
15	ಕಂಪ್ಯೂಟರ್ ತರಬೇತಿಯನ್ನು ಪಡೆದಿದ್ದಲ್ಲಿ ಪ್ರಮಾಣ ಪತ್ರಗಳ ಪ್ರತಿಗಳೊಂದಿಗೆ ವಿವರಗಳು				
16	ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ				
17	ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರ? (ಸರ್ಕಾರಿ ಸೇವೆಯಲ್ಲಿದ್ದ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರದ ನಕಲನ್ನು ಲಗತ್ತಿಸಬೇಕು)	ಹೌದು		ಇಲ್ಲ	
18	ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ				
19	ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ				
20	ನಿಮ್ಮ ಸ್ವವಿಳಾಸವಿರುವ ರೂ.5/–ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ?				

ಘೋಷಣೆ

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ನಾನು ಬದ್ಧನಾಗಿರುತ್ತೇನೆ /ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಉಡುಪಿ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ/ಸಿದ್ಧಳಿದ್ದೇನೆ.

ಸ್ಥಳ :

ದಿನಾಂಕ: **ಅಭ್ಯರ್ಥಿಯ ಸಹಿ.**

PR.121
SC.5

ಉಡುಪಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ

ಅಧಿಸೂಚನೆ ಸಂಖ್ಯೆ: ADMN/04/2013, ದಿನಾಂಕ: 01–10–2013

ವಿಷಯ : ಜಿಲ್ಲಾ ನ್ಯಾಯಾಲಯ ಉಡುಪಿಯ ಘಟಕದಲ್ಲಿ ಖಾಲಿ ಇರುವ ಜವಾನ ಹುದ್ದೆಗಳ ನೇಮಕಾತಿ ಬಗ್ಗೆ.

ಓದಲಾಗಿದೆ: ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: LCA- II/128/2012, ದಿನಾಂಕ: 24–09–2013.

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಘಟಕದಲ್ಲಿ ಖಾಲಿ ಇರುವ ಜವಾನ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 02–12–2013, ಸಂಜೆ 5–00 ಘಂಟೆ.

ಅರ್ಜಿ ಸಲ್ಲಿಸಬೇಕಾದ ವಿಳಾಸ:– ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಜಿಲ್ಲೆ, ಉಡುಪಿ.

ಭಾಗ: 1

4. ಜವಾನ (PEON):

ಹುದ್ದೆಗಳ ಸಂಖ್ಯೆ : 3

ವೇತನ ಶ್ರೇಣಿ:– 9600–200–12000–250–13000–300–14200–350–14550

ಹುದ್ದೆಗಳ ವರ್ಗೀಕರಣ:–

ಮೀಸಲಾತಿ	ಅಂ.ಅ. (Low vision)	ಮಾ.ಸೈ.	ಗ್ರಾಮೀಣ	ಒಟ್ಟು
ಪ್ರವರ್ಗ–1	1	–	–	1
ಸಾಮಾನ್ಯ	–	1	–	1
ಪ.ಜಾ.	–	–	1	1
ಒಟ್ಟು	**1**	**1**	**1**	**3**

ಶೈಕ್ಷಣಿಕ ವಿದ್ಯಾರ್ಹತೆಃ–

(1) ಏಳನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

(2) ಕನ್ನಡ ಓದಲು ಬರೆಯಲು ತಿಳಿದಿರಬೇಕು.

ಆಯ್ಕೆ ವಿಧಾನಃ–

ಮೇಲೆ ಹೇಳಿದ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ 1ಃ10 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಸೂಚನೆಃ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಕನ್ನಡ ಮಾಧ್ಯಮ ಹಾಗೂ ಯೋಜನಾ ನಿರಾಶ್ರಿತ ಅಭ್ಯರ್ಥಿಗಳ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ವರ್ಗಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಇತರ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಭಾಗ–2ಃ–

ವಯೋಮಿತಿ

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

(1) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸತಕ್ಕದು.

(2) ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಎ, 3ಬಿ	38 ವರ್ಷ
ಪ.ಜಾತಿ, ಪ.ಪಂಗಡ, ಪ್ರವರ್ಗ – 1	40 ವರ್ಷ

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

ವಯೋಮಿತಿ ಸಡಿಲಿಕೆಃ

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

(1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

(2) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

(3) ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

(4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

ಪರಿವೀಕ್ಷಣಾ ಅವಧಿಃ

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗಾಗಿ:

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

ಭಾಗ–3

ಅರ್ಜಿ ಸಲ್ಲಿಸುವ ವಿಧಾನ:

1. ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ಲಗ್ತೀಕರಿಸಿದ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚುಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತನ್ನ ಕೈಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು ಹಾಗೂ ಅರ್ಜಿ ನಮೂನೆಯಲ್ಲಿ ಹುದ್ದೆ, ವರ್ಗ ಹಾಗೂ ಮೀಸಲಾತಿಯನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.
3. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು. ಒಂದೇ ಹುದ್ದೆಗೆ ವಿವಿಧ ಮೀಸಲಾತಿಯಡಿಯಲ್ಲಿ ಅರ್ಜಿಸಲ್ಲಿಸುವವರು ಪ್ರತ್ಯೇಕವಾಗಿ ಅರ್ಜಿಗಳನ್ನು ಹಾಗೂ ಆ ಅರ್ಜಿಗಳಲ್ಲಿ ಕಡ್ಡಾಯವಾಗಿ ಯಾವ ವರ್ಗ / ಮೀಸಲಾತಿಯಡಿಯಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿರುವಿರಿ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.
4. ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರ ಪ್ರಮಾಣ ಪತ್ರಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸತಕ್ಕದ್ದು. ಅರ್ಜಿಯೊಂದಿಗೆ ಮೂಲ ಪ್ರತಿಗಳನ್ನು ಲಗ್ತೀಕರಿಸುವ ಅವಶ್ಯಕತೆ ಇರುವುದಿಲ್ಲ. ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆದಿರಬೇಕು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:

1. ವಿದ್ಯಾರ್ಹತೆಯ ಬಗೆಗಿನ ಅಂಕಪಟ್ಟಿಗಳ ನಕಲು ಪ್ರತಿಗಳು.
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ / ವರ್ಗಾವಣೆ ಪತ್ರ / ಇನ್ನಾವುದೇ ಅಧಿಕೃತ ದಾಖಲಾತಿಗಳು.
3. ಪ. ಜಾತಿ / ಪ. ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು.
4. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ :ಸಿಆಸುಇ /96/ ಸೇನನಿ/2005 ದಿನಾಂಕ: 10–08–2005ರ ಪ್ರಕಾರ ನಿಗದಿತ ನಮೂನೆ–2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.
5. ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
6. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.
7. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿನಾಂಕ: 19–11–2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ:ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.
8. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
9. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
10. ಸ್ವಯಂ ವಿಳಾಸವಿರುವ ರೂ.5/– ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.
11. ಅಭ್ಯರ್ಥಿಗಳು ಅರ್ಜಿಯೊಂದಿಗೆ ಕೊನೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಯ ಮುಖ್ಯೋಪಾಧ್ಯಾಯರು / ಪ್ರಾಂಶುಪಾಲರಿಂದ ಪಡೆದ ನಡತೆ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ಪ್ರತಿಯನ್ನು ಲಗ್ತೀಕರಿಸತಕ್ಕದ್ದು.
12. ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ನಡತೆಯ ಬಗ್ಗೆ ತಮ್ಮ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ (ಹಿಂದೆ ಕಲಿತ ಶಾಲಾ ಅಥವಾ ಕಾಲೇಜು ಮುಖ್ಯಸ್ಥರನ್ನು ಹೊರತು ಪಡಿಸಿ) ಅರ್ಜಿ ಸಲ್ಲಿಸುವ ದಿನಾಂಕದ ಆರು ತಿಂಗಳ ಒಳಗೆ ಪಡೆದ ಎರಡು ಪ್ರಮಾಣ ಪತ್ರಗಳನ್ನು ಲಗತ್ತಿಕರಿಸತಕ್ಕದ್ದು. (ಗಣ್ಯ ವ್ಯಕ್ತಿಗಳ ರುಜುವಿನಡಿಯಲ್ಲಿ ಹೆಸರು ಮತ್ತು ಮೊಹರು ಕಡ್ಡಾಯವಾಗಿ ಇರತಕ್ಕದ್ದು)

ಅಭ್ಯರ್ಥಿಗಳಿಗೆ ಸೂಚನೆಃ–

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
2. ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ, ಮೀಸಲಾತಿ, ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಹಾಗೂ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಮೀಸಲಾತಿಯನ್ನು ಕೋರಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
3. ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸಮುಚಿತ ಮಾರ್ಗದ ಮುಖಾಂತರವೇ ಸಲ್ಲಿಸಬೇಕು.
4. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
5. ಅಭ್ಯರ್ಥಿಗಳು ತಮ್ಮ ಅರ್ಜಿಯ ಜೊತೆ 5–00 ರೂ.ಗಳ ಸ್ಟಾಂಪು ಲಗತ್ತಿಸಿರುವ ಸ್ವವಿಳಾಸವಿರುವ ಲಕೋಟೆಯನ್ನು ಲಗತ್ತಿಸಿರಬೇಕು.
6. ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮೇಲೆ ನಮೂದಿಸಿರಬೇಕು.
7. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗತಕ್ಕದ್ದು.
8. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವುದಿಲ್ಲ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಉಡುಪಿ.

ಅರ್ಜಿ ನಮೂನೆ

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಮೇಲೆ ಸಹಿ ಮಾಡಿ ಅಂಟಿಸುವುದು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಉಡುಪಿ ಜಿಲ್ಲೆ, ಉಡುಪಿ – ಇವರಿಗೆ.

ಮಾನ್ಯರೇ,

ಉಡುಪಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆ. ಎಡಿಎಂಎನ್/ 4 /2013, ದಿನಾಂಕ: 01–10–2013 ರ ಪ್ರಕಾರ ಜವಾನ ಹುದ್ದೆಗೆ ನಾನು ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ.

<table>
<tr><td>1</td><td>ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ)</td><td colspan="3"></td></tr>
<tr><td>2</td><td>ತಂದೆಯ / ತಾಯಿಯ / ಗಂಡನ ಹೆಸರು</td><td colspan="3"></td></tr>
<tr><td>3</td><td>ಜನ್ಮ ದಿನಾಂಕ</td><td colspan="3"></td></tr>
<tr><td rowspan="2">4</td><td rowspan="2">ವಯಸ್ಸು</td><td>ವರ್ಷಗಳು</td><td>ತಿಂಗಳುಗಳು</td><td>ದಿನಗಳು</td></tr>
<tr><td></td><td></td><td></td></tr>
<tr><td rowspan="2">5</td><td rowspan="2">ಲಿಂಗ</td><td>ಪುರುಷ</td><td colspan="2">ಮಹಿಳೆ</td></tr>
<tr><td></td><td colspan="2"></td></tr>
<tr><td>6</td><td>ರಾಷ್ಟ್ರೀಯತೆಃ</td><td colspan="3"></td></tr>
<tr><td>7</td><td>ಧರ್ಮ ಮತ್ತು ಜಾತಿ</td><td colspan="3"></td></tr>
<tr><td rowspan="2">8</td><td rowspan="2">ವೈವಾಹಿಕ ಸ್ಥಿತಿ</td><td>ವಿವಾಹಿತ</td><td colspan="2">ಅವಿವಾಹಿತ</td></tr>
<tr><td></td><td colspan="2"></td></tr>
<tr><td>9</td><td>ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ?</td><td colspan="3"></td></tr>
<tr><td rowspan="2">10</td><td rowspan="2">ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ?</td><td>ಹೌದು</td><td colspan="2">ಇಲ್ಲ</td></tr>
<tr><td></td><td colspan="2"></td></tr>
<tr><td rowspan="2">11</td><td rowspan="2">ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ?</td><td>ಹೌದು</td><td colspan="2">ಇಲ್ಲ</td></tr>
<tr><td></td><td colspan="2"></td></tr>
</table>

12	ಕೋರುವ ಮೀಸಲಾತಿ	ಪ್ರವರ್ಗ–1	ಸಾಮಾನ್ಯ	ಪ. ಜಾತಿ
	(ಕೋರುವ ಮೀಸಲಾತಿಯನ್ನು √ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು)			
13	ನೀವು ಈ ಯಾವುದಾದರೂ ಮೀಸಲಾತಿಯಡಿಯಲ್ಲಿ ಅಡಿಯಲ್ಲಿ ಬರುತ್ತೀರ?	ಅಂ.ಅ (Low vision)	ಮಾ.ಸೈ	ಗ್ರಾಮೀಣ
	(ಸೇರುವ ಮೀಸಲಾತಿಯನ್ನು √ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು)			

14	**ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳುಃ– (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)**				
	ಉತ್ತೀರ್ಣ ಹೊಂದಿದ ಪರೀಕ್ಷೆಗಳು	ಉತ್ತೀರ್ಣ ಹೊಂದಿದ ವರ್ಷ ಮತ್ತು ನೋಂದಣಿ ಸಂಖ್ಯೆ.	ಗರಿಷ್ಠ ಅಂಕಗಳು	ಪಡೆದಿರುವ ಅಂಕಗಳು	ಶೇಕಡ ವಾರು ಅಂಕಗಳು
	7ನೇ ತರಗತಿ				
15	ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ				
16	ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರ? (ಸರ್ಕಾರಿ ಸೇವೆಯಲ್ಲಿದ್ದ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರದ ನಕಲನ್ನು ಲಗತ್ತಿಸಬೇಕು)	ಹೌದು		ಇಲ್ಲ	
17	ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ				
18	ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ				
19	ನಿಮ್ಮ ಸ್ವವಿಳಾಸವಿರುವ ರೂ.5/–ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ?				

ಘೋಷಣೆ

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ನಾನು ಬದ್ಧನಾಗಿರುತ್ತೇನೆ /ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಉಡುಪಿ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ/ಸಿದ್ಧಳಿದ್ದೇನೆ

ಸ್ಥಳ :

ದಿನಾಂಕ: ಅಭ್ಯರ್ಥಿಯ ಸಹಿ.

PR.122
SC.5